ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು

ಆರೋಗ್ಯ ಸೌಧ, ಮಹಡಿ, ಮಾಗಡಿ ರಸ್ತೆ, ಬೆಂಗಳೂರು-560023

---

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/83/2021-22 ದಿನಾಂಕ: 30.03.2022

ಇವರಿಗೆ,

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತ ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.

ಮಾನ್ಯರೆ,

ವಿಷಯ: 12 ರಿಂದ 14 ವರ್ಷದೊಳಗಿನ ಅರ್ಹ ಮಕ್ಕಳಿಗೆ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕಾಕರಣ ಕುರಿತು

ಉಲ್ಲೇಖ: 1. ದಿನಾಂಕ: 29.03.2022 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ನಿರ್ದೇಶಿಸಿದಂತೆ.

2. ನಿರ್ದೇಶನಾಲಯದ ಪತ್ರ ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/34/2020-21 ದಿನಾಂಕ: 29.03.2022 ರ ಜಂಟಿ ಸುತ್ತೋಲೆ.

3. ನಿರ್ದೇಶನಾಲಯದ ಪತ್ರ ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/116/2021-22 ದಿನಾಂಕ: 15.03.2022

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 29.03.2022 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ಉಲ್ಲೇಖ-2 ರ ಜಂಟಿ ಸುತ್ತೋಲೆಗೆ **ಮುಂದುವರೆದಂತೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಯಿತು.**

1. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಉಪಸ್ಥಿತಿಯಲ್ಲಿ ಆರೋಗ್ಯ ಇಲಾಖೆಯ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ಕರೆದು ಜಿಲ್ಲೆಯ ಅಗತ್ಯತೆಗನುಗುಣವಾಗಿ ಮತ್ತು ಮಕ್ಕಳಿಗೆ ಪರೀಕ್ಷೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಸೂಕ್ತ ದಿನಾಂಕಗಳನ್ನು ಗೊತ್ತುಪಡಿಸಿಕೊಂಡು ಕೋರ್ಬಿವ್ಯಾಕ್ಸ್ ಲಸಿಕಾಕರಣ ಡ್ರೈವ್ ಅನ್ನು ಹಮ್ಮಿಕೊಂಡು ಏಪ್ರಿಲ್ 9, 2022 ರೊಳಗಾಗಿ ಸಂಪೂರ್ಣಗೊಳಿಸಲು ಕ್ರಿಯಾಯೋಜನೆ ರೂಪಿಸುವುದು.
2. ಆರೋಗ್ಯ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಸೂಕ್ಷ್ಮ ಕ್ರಿಯಾ ಯೋಜನೆ ರೂಪಿಸಿ 31.03.2022 ರೊಳಗೆ ರಾಜ್ಯಕ್ಕೆ ಕಳುಹಿಸಿಕೊಡುವುದು.
3. ಕೋರ್ಬಿವ್ಯಾಕ್ಸ್ ಲಸಿಕಾಕರಣ ಡ್ರೈವ್‌ಗೆ ವ್ಯಾಪಕ ಪ್ರಚಾರವನ್ನು ನೀಡಿ ಬೇಡಿಕೆಗನುಗುಣವಾಗಿ ಲಸಿಕಾಕರಣ ಕ್ಯಾಂಪ್‌ಗಳನ್ನು ಆಯೋಜಿಸುವುದು.
4. ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳು ಶಿಕ್ಷಣ ಇಲಾಖೆಯಿಂದ ನಿಯೋಜಿಸಲ್ಪಟ್ಟ ನೋಡಲ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವುದು.
5. ವ್ಯಾಕ್ಸಿನೇಟರ್‌ಗಳು ಮಕ್ಕಳಿಗೆ ಕೋರ್ಬಿವ್ಯಾಕ್ಸ್ ಲಸಿಕೆ ನೀಡುವ ಮುನ್ನ ಆ ಫಲಾನುಭವಿಯು 12 ವರ್ಷ ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ತರಬೇತಿ ನೀಡುವುದು.

ಅರುಂಧತಿ

6. ಅರ್ಹ ಮಕ್ಕಳಿಗೆ ಕೋರ್ಬಿವ್ಯಾಕ್ಸ್ ಲಸಿಕೆಯ ಎರಡೂ ಡೋಸ್ ಲಸಿಕೆಯ ಲಸಿಕಾಕರಣದ ಗರಿಷ್ಠ ವ್ಯಾಪ್ತಿಯ ಪ್ರಗತಿಯನ್ನು ಹೊಂದುವುದು.
7. ಯಾವುದೇ ಫಲಾನುಭವಿಯು ಈ ಹಿಂದೆ ಕೋವಿಡ್-19 ಸೋಂಕು ಹೊಂದಿದ ಪೂರ್ವ ಇತಿಹಾಸವಿದ್ದರೆ ಅಂತಹ ಮಕ್ಕಳಿಗೆ ಕೋವಿಡ್-19 ಸೋಂಕಿನಿಂದ ಚೇತರಿಸಿಕೊಂಡ/ಬಿಡುಗಡೆ ಹೊಂದಿದ 3 ತಿಂಗಳ ನಂತರ ಕೋರ್ಬಿವ್ಯಾಕ್ಸ್ ಲಸಿಕೆಯನ್ನು ನೀಡುವುದು.
8. ಫಲಾನುಭವಿಯು ಇತರೆ ಯಾವುದೇ ಲಸಿಕೆಯನ್ನು ಪಡೆದಿದ್ದರೆ (ಉದಾಹರಣೆಗೆ: ಟಿಡಿ ಲಸಿಕೆ) ಕೋರ್ಬಿವ್ಯಾಕ್ಸ್ ಲಸಿಕೆ ನೀಡುವ ಮುನ್ನ 15 ದಿನಗಳ ಅಂತರ ಹೊಂದಿರಬೇಕು.
9. ಸಹ ಅಸ್ವಸ್ಥತೆ ಹೊಂದಿದ ಮಕ್ಕಳ ಲಸಿಕಾಕರಣವನ್ನು ವೈದ್ಯರ ಮೇಲ್ವಿಚಾರಣೆಯಲ್ಲಿಯೇ ನಡೆಸಲಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು.
10. ಕೋರ್ಬಿವ್ಯಾಕ್ಸ್ ಲಸಿಕೆಯ ವ್ಯರ್ಥತೆಯನ್ನು ಮೇಲ್ವಿಚಾರಣೆ ಮಾಡುವುದು ಮತ್ತು ಲಸಿಕೆಯ ವ್ಯರ್ಥತೆ ಅತ್ಯಂತ ಕಡಿಮೆ ಇರುವುದನ್ನು ಖಚಿತಪಡಿಸಿಕೊಳ್ಳುವುದು.
11. ಎಲ್ಲಾ ಹಂತಗಳಲ್ಲಿ ಕೋವಿಡ್-19 ಮುನ್ನೆಚ್ಚರಿಕಾ ನಡವಳಿಕೆ ಮತ್ತು ಕೋವಿಡ್-19 ಲಸಿಕಾಕರಣದ ಮಾರ್ಗಸೂಚಿಗಳನ್ನು ಅನುಸರಿಸುವುದು.
12. ಹೆಚ್ಚಿನ ಸಂಖ್ಯೆಯ ಖಾಸಗಿ ಶಿಕ್ಷಣ ಸಂಸ್ಥೆಗಳು ಬಿಬಿಎಂಪಿ ವ್ಯಾಪ್ತಿಯಲ್ಲಿ ಮತ್ತು ಇತರೆ ನಗರ ಪ್ರದೇಶಗಳಲ್ಲಿ ಇದ್ದು ಇಲ್ಲಿ ವ್ಯಾಸಂಗ ಮಾಡುವ 12 ರಿಂದ 14 ವರ್ಷದ ಮಕ್ಕಳಿಗೆ ಕೋರ್ಬಿವ್ಯಾಕ್ಸ್ ಲಸಿಕೆಯ ಲಸಿಕಾಕರಣ ಕ್ಯಾಂಪ್ ಆಯೋಜಿಸಲು ಆಯಾ ಸಂಸ್ಥೆಯ ಮುಖ್ಯಸ್ಥರೊಂದಿಗೆ ಸಮನ್ವಯಿಸುವುದು.
13. ಶಾಲೆಯಿಂದ ಹೊರಗುಳಿದ 12 ರಿಂದ 14 ವರ್ಷದೊಳಗಿನ ಮಕ್ಕಳ ಲೈನ್‌ಲಿಸ್ಟ್ ಅನ್ನು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ರವರಿಂದ ಪಡೆಯುವುದು.
14. CRP and BRP ಗಳೊಂದಿಗೆ ಸಮನ್ವಯಿಸಿ ಮಕ್ಕಳನ್ನು ಲಸಿಕಾಕರಣಕ್ಕೆ ಸಜ್ಜುಗೊಳಿಸಿ ಲಸಿಕಾಕರಣವನ್ನು ಸುಗಮಗೊಳಿಸುವುದು.
15. 12 ರಿಂದ 14 ವರ್ಷದೊಳಗಿನ ಮಕ್ಕಳ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕಾಕರಣ ಅಭಿಯಾನವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವುದು.

ಅರುಂಧತಿ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
2. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ)

ಮಾಹಿತಿಗಾಗಿ:

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ
3. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
5. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
6. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. (ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರುತ್ತಾ)

7. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
8. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.
9. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
10. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
11. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತುಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
12. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
13. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
14. ಕಛೇರಿ ಪ್ರತಿ